ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಮೂರನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001.

E-mail ID: icps.kar@gmail.com
Ph.No.080-22867383

ಸಂ:ಕರಾಸಮರಸೊ/ಮರ/ಸುತ್ತೋಲೆ-11/2020-21.
ದಿನಾಂಕ:06.04.2021

ಅಧ್ಯಕ್ಷರು ಮತ್ತು ಸದಸ್ಯರು,
ಮಕ್ಕಳ ಕಲ್ಯಾಣ ಸಮಿತಿ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಶಾಲೆಯಿಂದ ದೂರ ಉಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವುದಕ್ಕೆ ಸಂಬಂಧಿಸಿದಂತೆ ಬಂದ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವ ಕುರಿತು.

ಉಲ್ಲೇಖ: 1) ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ:15768/2013 ರ ಅನುಷ್ಠಾನದ ಕುರಿತು.
2) ಇದೇ ಕಛೇರಿ ಸಮಸಂಖ್ಯೆ ಸುತ್ತೋಲೆ ದಿನಾಂಕ:17-06-2020.

* * * * * * *

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ಕರೆತರುವ ಸಂಬಂಧ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಅಧ್ಯಕ್ಷತೆಯಲ್ಲಿ ಉನ್ನತ ಅಧಿಕಾರಿಗಳ ಸಮಿತಿಯ ಘನ ಉಚ್ಚನ್ಯಾಯಾಲಯದ ನಿರ್ದೇಶನದಂತೆ ಸಿದ್ಧಪಡಿಸಲಾಗಿರುವ **"ವಲಸಿಗ ಮಕ್ಕಳ ಹಾಗೂ ವಲಸಿಗ ಕೂಲಿಕಾರರ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ನೀತಿ-2019"** ರ ನೀತಿಯಲ್ಲಿನ ಅಂಶಗಳನ್ನು ಯಥಾವತ್ತಾಗಿ ಪಾಲಿಸಲು ಸಂಬಂಧ ಪಟ್ಟ ಇಲಾಖೆಗಳು ಅಗತ್ಯ ಕ್ರಮ ತೆಗೆದುಕೊಳ್ಳಬೇಕೆಂದು ತೀರ್ಮಾನಿಸಿರುತ್ತದೆ.

ಸದರಿ ತೀರ್ಮಾನದಂತೆ ಮಕ್ಕಳ ಕಲ್ಯಾಣ ಸಮಿತಿಯ ದೀರ್ಘಕಾಲದ ನಡವಳಿಯಿಂದಾಗಿ ಮಕ್ಕಳು ಶೈಕ್ಷಣಿಕ ವರ್ಷದಲ್ಲಿ ತರಗತಿಗಳಿಗೆ ಹಾಜರಾಗದೇ ಇದ್ದಲ್ಲಿ, ಶೈಕ್ಷಣಿಕವಾಗಿ ಹಿಂದುಳಿಯುವ ಅವಕಾಶ ಹೆಚ್ಚಾಗಿರುವುದರಿಂದ, ಈ ಕುರಿತು ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅವಶ್ಯಕ ಮಾರ್ಗದರ್ಶನಗಳನ್ನು ನೀಡಬೇಕೆಂದು ಸೂಚಿಸಿರುತ್ತಾರೆ. ಆದ್ದರಿಂದ ಈ ಕುರಿತು ಉಲ್ಲೇಖ (2)ರಂತೆ ಈಗಾಗಲೇ ಸುತ್ತೋಲೆಯನ್ನು ಹೊರಡಿಸಲಾಗಿದೆ.

ಆದ್ದರಿಂದ **"ಶಾಲೆಯಿಂದ ದೂರ ಉಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಪ್ರಕರಣಗಳು"** ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದಿದ್ದಲ್ಲಿ ಸದರಿ ಎಲ್ಲಾ ಪ್ರಕರಣಗಳನ್ನು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ **ಆದ್ಯತೆಯ ಮೇರೆಗೆ ಶೀಘ್ರವಾಗಿ ಇತ್ಯರ್ಥ ಪಡಿಸಲು** ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಉಲ್ಲೇಖ (2)ರ ಸುತ್ತೋಲೆಯಲ್ಲಿ ಸೂಚಿಸಿದಂತೆ ತಾವುಗಳು ಕೈಗೊಂಡ ಕ್ರಮದ ಬಗ್ಗೆ ಈ ಪತ್ರ ತಲುಪಿದ ಕೂಡಲೇ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಎಲ್ಲಾ ಜಿಲ್ಲೆಗಳು ಇವರ ಮಾಹಿತಿಗಾಗಿ.

E/School